# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ. | 2587 |
| ಮಾನ್ಯ ಸದಸ್ಯರ ಹೆಸರು | ಡಾ. ಚಂದ್ರಶೇಖರ್ ಬಿ ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 24.03.2022 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಬಕಾರಿ ಇಲಾಖೆಯಲ್ಲಿ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಂಡ್ಯ ಪಶ್ಚಿಮ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮೊಕದ್ದಮೆ ಸಂಖ್ಯೆ: 64/2019 ರಲ್ಲಿ ಸಾರ್ವಜನಿಕ ಸೇವೆಯಲ್ಲಿರುವ ಸಿಬ್ಬಂದಿಯವರ ಮೇಲೆ ಆರೋಪ ರುಜುವಾತಾಗಿ ಮಂಡ್ಯ ನ್ಯಾಯಾಲಯಕ್ಕೆ ಅಂತಿಮ ತನಿಖಾ ವರದಿಯನ್ನು (ಛಾರ್ಜ್ ಶೀಟ್) ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಬಂದಿದೆ. |
| ಆ) | ಬಂದಿದ್ದಲ್ಲಿ ಕ್ರಿಮಿನಲ್ ಪ್ರಕರಣದಲ್ಲಿ ಆರೋಪಿಯಾಗಿರುವ ಸಿಬ್ಬಂದಿಯವರನ್ನು ಅಭಿಯೋಜನೆ ಒಳಪಡಿಸಲು ಅನುಮತಿಯನ್ನು ನೀಡಲು ವಿಳಂಬ ನೀತಿ ಅನುಸರಿಸುತ್ತಿರಲು ಕಾರಣವೇನು; | ಆರಕ್ಷಕ ಉಪ ನಿರೀಕ್ಷಕರು, ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ ಇವರು ಕೆ. ಸುಷ್ಮಾ, ಅಂದಿನ ಅಬಕಾರಿ ನಿರೀಕ್ಷಕರು, ಮಳವಳ್ಳಿ ವಲಯ, ಮಂಡ್ಯ ಇವರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲು ಅನುಮತಿ ನೀಡುವಂತೆ ದಿನಾಂಕ:23.05.2020ರ ಪತ್ರದಲ್ಲಿ ಎಫ್.ಐ.ಆರ್ ಪ್ರತಿಯನ್ನು ಮಾತ್ರ ಸಲ್ಲಿಸಿದ್ದು, ಅಭಿಯೋಜನಾ ಮಂಜೂರಾತಿ ನೀಡುವ ಸಂಬಂಧ ಪರಿಶೀಲನೆಗೆ ಅಗತ್ಯ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವಂತೆ ದಿನಾಂಕ:22.09.2020ರ ಪತ್ರದಲ್ಲಿ ಕೋರಲಾಗಿ ಕೆಲವೊಂದು ದಾಖಲೆಗಳನ್ನು ಮಾತ್ರ ಸಲ್ಲಿಸಿದ್ದು, ಸಂಪೂರ್ಣ ದಾಖಲಾತಿಗಳನ್ನು ಸಲ್ಲಿಸದೆ |

| | | |
|---|---|---|
| | | ಇರುವುದರಿಂದ ಮತ್ತೊಮ್ಮೆ ದಿನಾಂಕ: 24.08.2021ರ ಪತ್ರದಲ್ಲಿ ಸಾಕ್ಷಿಗಳ ಹೇಳಿಕೆಗಳೊಂದಿಗೆ ಆರೋಪ ಪಟ್ಟಿಯ ದೃಢೀಕೃತ ಪ್ರತಿಗಳನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು.<br><br>ಅದರಂತೆ, ಆರಕ್ಷಕ ಉಪ ನಿರೀಕ್ಷಕರು, ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ, ಇವರ ದಿನಾಂಕ: 10.09.2021ರ ಪತ್ರದಲ್ಲಿ ಸಂಪೂರ್ಣ ದಾಖಲಾತಿಗಳನ್ನು ಸಲ್ಲಿಸಿದ್ದು, ಸದರಿ ಪತ್ರವು ದಿನಾಂಕ:18.01.2022 ರಂದು ಸ್ವೀಕೃತವಾಗಿದ್ದು, ಅಭಿಯೋಜನೆಗೊಳಪಡಿಸಲು ಕ್ರಮವಹಿಸಲಾಗುತ್ತಿದೆ. ಆದ್ದರಿಂದ, ಅಭಿಯೋಜನೆಗೊಳಪಡಿಸಲು ಅನುಮತಿಯನ್ನು ನೀಡಲು ಯಾವುದೇ ವಿಳಂಬ ನೀತಿ ಅನುಸರಿಸಿರುವುದಿಲ್ಲ. |
| ಇ) | ಗಂಭೀರ ಪ್ರಕರಣಗಳಲ್ಲಿ ಆರೋಪಿಯಾಗಿರುವವರನ್ನು ಅಮಾನತ್ತುಗೊಳಿಸಿ ನಂತರ ಶಿಸ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದರೂ ಸಹ ಸದರಿ ಸಿಬ್ಬಂದಿಯವರನ್ನು ಇದುವರೆವಿಗೂ ಅಮಾನತ್ತುಗೊಳಿಸದಿರುವುದು ಮತ್ತು ಯಾವುದೇ ತರಹದ ಶಿಸ್ತು ಕ್ರಮಕೈಗೊಳ್ಳದೇ ಇರಲು ಕಾರಣವೇನು; | ಶ್ರೀಮತಿ ಕೆ. ಸುಷ್ಮಾ ಇವರ ವಿರುದ್ಧ ದಾಖಲಿಸಿರುವ ಎಫ್.ಐ.ಆರ್.ಗೆ ಸಂಬಂಧಪಟ್ಟಂತೆ ಆರಕ್ಷಕ ಉಪ ನಿರೀಕ್ಷಕರು, ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ ಇವರಿಂದ ನೌಕರರನ್ನು ಅಮಾನತ್ತುಪಡಿಸಲು ಮತ್ತು ಶಿಸ್ತು ಕ್ರಮ ಕೈಗೊಳ್ಳಲು ಪೂರ್ಣ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಸದರಿಯವರಿಂದ ದಿನಾಂಕ:18.01.2022 ರಂದು ತಡವಾಗಿ ದಾಖಲಾತಿಗಳು ಸ್ವೀಕೃತವಾಗಿದ್ದು, ಕೆ. ಸುಷ್ಮಾ, ಅಂದಿನ ಅಬಕಾರಿ ನಿರೀಕ್ಷಕರು, ಮಳವಳ್ಳಿ ವಲಯ, ಮಂಡ್ಯ ಇವರನ್ನು ಅಭಿಯೋಜನೆಗೊಳಪಡಿಸಲು ಮತ್ತು ಇಲಾಖಾ ವಿಚಾರಣೆ ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |
| ಈ) | ಸಾರ್ವಜನಿಕ ಸೇವೆಯಲ್ಲಿರುವ ನೌಕರರ ಮೇಲೆ ಕ್ರಿಮಿನಲ್ ಅಪರಾಧದಂತಹ ಗಂಭೀರ ಆರೋಪವಿದ್ದರೂ ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ ಇಲಾಖೆಯಲ್ಲಿ ಶಿಸ್ತಿಗೆ ಬೆಲೆಯಿಲ್ಲದಂತಾಗಿದ್ದು, ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? | |

**ಆಇ 60 ಇಎಲ್‌ಕ್ಯೂ 2022**

(ಕೆ. ಗೋಪಾಲಯ್ಯ)
ಅಬಕಾರಿ ಸಚಿವರು.